**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.2200/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಕುಮಾರ | ಪ್ರಾಸಾ-3 |
| ತಂದೆಯ ಹೆಸರು | : ನಿಂಗಯ್ಯ | ಚಾಸಾ-4 |
| ವಯಸ್ಸು | : 48 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 27.01.2026. |
| ವಾಸಸ್ಥಳ | : ಬಕ್ಕೀ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1 ರಿಂದ 3 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-2 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-3 ರಿಂದ 5 ರ ಪೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 2 ವರ್ಷಗಳ ಹಿಂದೆ ನಾನು ಕೆಲಸ ಮುಗಿಸಿಕೊಂಡು ಹಿಂತಿರುಗಿ ಬರುವಾಗ ಚಾಸಾ-1 ರವರ ಅಂಗಡಿಯ ಬಳಿ ಪೋಲಿಸರು ನಿಪಿ-2 ಕ್ಕೆ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸದರಿ ಸಹಿಯನ್ನು ಯಾವ ವಿಚಾರದ ಕುರಿತು ಮಾಡಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-2 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಿಪಿ-3 ರಿಂದ 5 ನ್ನು ಪೋಲಿಸರು ಸಹಿ ಮಾಡಿಸಿದ ಸಮಯದಲ್ಲಿ ತೆಗೆದಿರುತ್ತಾರೆ. ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಒಂದು ನೈಟಿ ತೋರಿಸಲಾಗಿ ಅದರ ಬಗ್ಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.12.02.2024 ರಂದು ಸ.5.00 ರಿಂದ 6.00 ರ ಸಮಯದಲ್ಲಿ ಬಕ್ಕೀ ಗ್ರಾಮದ ಚಾಸಾ-1 ರವರ ಅಂಗಡಿಯ ಬಳಿ ನಿಪಿ-2 ಕ್ಕೆ ಸಹಿ ಮಾಡಿರುತ್ತೀರ ಎಂದರೆ ನನಗೆ ತಿಳಿದಿರುವುದಿಲ್ಲ. ಆ ದಿನ ಚಾಸಾ-1 ರವರ ಅಂಗಡಿಗೆ ನ್ಯಾಯಾಲಯದ ಮುಂದಿರುವ ಆರೋಪಿಯು ಅಂಗಡಿಗೆ ನುಗ್ಗಿ, ಅವಾಚ್ಯ ಶಬ್ದದಿಂದ ಬೈದು ಧ್ವಂಸ ಮಾಡಲು ಪ್ರಯತ್ನಿಸಿದ ಬಗ್ಗೆ ತಯಾರಿಸಿದ ಮಹಜರ್ ಪ್ರತಿಗೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-1 ರವರು ತಾವು

ಧರಿಸಿದ್ದ ನೈಟಿ ಮತ್ತು ಒಂದು ಗ್ಯಾಸ್ ಪೈಪ್ ನ್ನು ಪೋಲಿಸರ ವಶಕ್ಕೆ ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-3 ರಿಂದ 5 ನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಯು ನಮ್ಮ ಊರ ಮನೆಯವರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.